ಗಣಪ್ ಕಳುಹಿ

# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಸದಸ್ಯರ ಹೆಸರು | : | ಶ್ರೀ ಎಸ್.ವ್ಹಿ. ಸಂಕನೂರ |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 79 (198) |
| ಉತ್ತರಿಸಬೇಕಾದ ಸಚಿವರು | : | ಮಾನ್ಯ ಕೃಷಿ ಸಚಿವರು |
| ಉತ್ತರಿಸಬೇಕಾದ ದಿನಾಂಕ | : | 10-12-2018 |

| ಕ್ರಸಂ. | ಪ್ರಶ್ನೆ | ಉತ್ತರ |
|---|---|---|
| ಅ. | ಕೇಂದ್ರ ಸರ್ಕಾರದಲ್ಲಿ ಯು.ಜಿ.ಸಿ.ಯ 7ನೇ ವೇತನ ಆಯೋಗದ ಶಿಫಾರಸ್ಸುಗಳನ್ನು ರಾಜ್ಯದ ಕೃಷಿ ವಿಶ್ವವಿದ್ಯಾಲಯಗಳ ಪ್ರಾಧ್ಯಾಪಕರುಗಳಿಗೆ ಜಾರಿಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; | ಕರ್ನಾಟಕ ರಾಜ್ಯದಲ್ಲಿರುವ 3 ಕೃಷಿ ವಿಶ್ವವಿದ್ಯಾಲಯಗಳು ಹಾಗೂ ಒಂದು ಕೃಷಿ ಮತ್ತು ತೋಟಗಾರಿಕೆ ವಿಶ್ವವಿದ್ಯಾಲಯವು ರಾಜ್ಯದ ಕೃಷಿ ಇಲಾಖೆಯ ಆಡಳಿತದ ಅಧೀನದಲ್ಲಿರುತ್ತವೆ. ಈ ವಿಶ್ವವಿದ್ಯಾಲಯಗಳಲ್ಲಿ ಕಾರ್ಯನಿರ್ವಹಿಸುವ ಶಿಕ್ಷಕ ಸಿಬ್ಬಂದಿಯವರಿಗೆ ಕೇಂದ್ರ ಸರ್ಕಾರದ 7ನೇ ವೇತನ ಆಯೋಗದ ಶಿಫಾರಸ್ಸಿನಂತೆ ಯುಜಿಸಿಯ ವೇತನವನ್ನು ಜಾರಿಗೊಳಿಸಲು ಬೇಕಾಗುವ ಹೆಚ್ಚುವರಿ ಹಣಕಾಸು ಅನುದಾನ, ಬಾಕಿ ಮೊತ್ತ, ಕೇಂದ್ರ ಸರ್ಕಾರ ಹಾಗೂ ರಾಜ್ಯ ಸರ್ಕಾರದ ಪಾಲು ಮತ್ತು ಮುಂದೆ ಮಾಹೆವಾರು ಬೇಕಾಗುವ ವೆಚ್ಚ, ಫಲಾನುಭವಿಗಳ ಸಂಖ್ಯೆ, ಮುಂತಾದ ವಿವರವಾದ ಮಾಹಿತಿಯನ್ನು 4 ವಿಶ್ವವಿದ್ಯಾಲಯಗಳಿಂದ ಪಡೆದು, ಕ್ರೋಢೀಕೃರಿಸಿ ಸಹಮತಿಗಾಗಿ ಆರ್ಥಿಕ ಇಲಾಖೆಗೆ ಸಲ್ಲಿಸಲಾಗಿದೆ. |
| ಆ. | ಕೇಂದ್ರದ 7ನೇ ವೇತನ ಆಯೋಗದ ಶಿಫಾರಸ್ಸುಗಳನ್ನು ಯಥಾವತ್ತಾಗಿ ಜಾರಿಗೊಳಿಸುವಲ್ಲಿ ವಿಳಂಬವಾಗಲು ಕಾರಣವೇನು; | ಪ್ರಸ್ತಾವನೆಗೆ ಸಂಬಂಧಿಸಿದಂತೆ ಆರ್ಥಿಕ ಇಲಾಖೆಯು ಕೆಲವೊಂದು ಹೆಚ್ಚಿನ ಮಾಹಿತಿ/ದಾಖಲೆಗಳನ್ನು ಒದಗಿಸುವಂತೆ ಕೋರಿದ್ದರ ಮೇರೆಗೆ ಕ್ರೋಢಿಕೃತ ಮಾಹಿತಿ/ದಾಖಲೆಗಳನ್ನು ಆರ್ಥಿಕ ಇಲಾಖೆಗೆ ಕಳುಹಿಸಲಾಗಿದೆ. |
| ಇ. | ಕೃಷಿ ವಿಶ್ವವಿದ್ಯಾಲಯ ಪ್ರಾಧ್ಯಾಪಕರ ನಿವೃತ್ತಿ ವಯೋಮಿತಿ ಎಷ್ಟು; ಸದ್ಯದ ನಿವೃತ್ತಿ ವಯೋಮಿತಿಯನ್ನು ಹೆಚ್ಚಿಸುವ ಕುರಿತು ಸರ್ಕಾರ ಚಿಂತನೆ ನಡೆಸಿದೆಯೇ? | ಕೃಷಿ ವಿಶ್ವವಿದ್ಯಾಲಯ ಪ್ರಾಧ್ಯಾಪಕರ ಸದ್ಯದ ನಿವೃತ್ತಿ ವಯೋಮಿತಿ 62 ವರ್ಷಗಳಿರುತ್ತವೆ. ಕೃಷಿ ವಿಶ್ವವಿದ್ಯಾಲಯ ಪ್ರಾಧ್ಯಾಪಕರ ಸದ್ಯದ ನಿವೃತ್ತಿ ವಯೋಮಿತಿಯನ್ನು ಹೆಚ್ಚಿಸುವ ಕುರಿತು ಸರ್ಕಾರ ಚಿಂತನೆ ನಡೆಸಿರುವುದಿಲ್ಲ. |

ಸಂಖ್ಯೆ: ಕೃಇ 77 ಕೃವಿವಿ 2018(55877)

(ಶ್ರೀ ಎನ್ ಹೆಚ್ ಶಿವಶಂಕರ ರೆಡ್ಡಿ)
ಕೃಷಿ ಸಚಿವರು